ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ರಾಜ್ಯದಲ್ಲಿ ಇರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಹಾಸ್ಟೆಲ್‌ಗಳ ಸಂಖ್ಯೆ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

1166 (1383) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಎಲ್ಲಾ ಹಾಸ್ಟೆಲ್‌ಗಳಿಗೂ ಮೂಲಭೂತ ಸೌಕರ್ಯಗಳನ್ನು ಸೂಕ್ತ ರೀತಿಯಲ್ಲಿ ಒದಗಿಸಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಇನ್ನೂ ಹಲವು ಹಾಸ್ಟೆಲ್‌ಗಳು, ಶೌಚಾಲಯ, ಆಹಾರ, ಹಾಸಿಗೆ ಇನ್ನಿತರೆ ಮೂಲಭೂತ ವಿಷಯಗಳಲ್ಲಿ ಉತ್ತಮ ಗುಣಮಟ್ಟದಿಂದ ಕೂಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಮೂಲಭೂತ ಸೌಕರ್ಯಗಳು ಉನ್ನತ ಗುಣಮಟ್ಟದಿಂದ ಕೂಡಿರಲು ಸರ್ಕಾರವು ಕೈಗೊಂಡ ಕ್ರಮಗಳೇನು;

(ಈ) ಕೆಲವು ಹಾಸ್ಟೆಲ್‌ಗಳಲ್ಲಿ ಸರಿಯಾದ ಭದ್ರತೆ ಇಲ್ಲದಿರುವುದು ಹಾಗೂ ಆಹಾರವನ್ನು ಕೊಳಕಾದ ಸ್ಥಳದಲ್ಲಿ ತಯಾರಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡ ಕ್ಷಿಪ್ರ ಕಾರ್ಯಗಳೇನು ; ಸಂಬಂಧಪಟ್ಟ ಅಧಿಕಾರಿಗಳು ಮುಂಬರುವ ದಿನಗಳಲ್ಲಿ ಈ ರೀತಿಯ ತಪ್ಪು ಎಸಗದಂತೆ ಸರ್ಕಾರವು ಮುನ್ನೆಚ್ಚರಿಕೆ ವಹಿಸುವುದೇ ;

(ಊ) ಹಾಗಿದ್ದಲ್ಲಿ, ಹಾಸ್ಟೆಲ್‌ಗಳಲ್ಲಿ ಶೌಚಾಲಯ, ಆಹಾರ, ನೀರು ಹಾಸಿಗೆ ಇನ್ನುಳಿದ ಮೂಲಭೂತ ಸೌಕರ್ಯಗಳನ್ನು ಉನ್ನತ ದರ್ಜೆಗೆ ಏರಿಸಲು ಸರ್ಕಾರದ ವತಿಯಿಂದ ನೀಡಲಾಗಿರುವ ಕಾಲಮಿತಿ ಎಷ್ಟು ? (ಪೂರ್ಣ ವಿವರ ನೀಡುವುದು)